KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-120
ಮಂಗಳವಾರ 11 ಮಾರ್ಚ್ 2025
Price: 2.00 Rs. Pages - 2

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ–ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508



ತಿಪಟೂರಿನ ಕಲ್ಪತರು ಸೆಂಟ್ರಲ್ ಶಾಲೆಯಲ್ಲಿ ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ ಶಾಲೆಯ ಹಳೇ ವಿದ್ಯಾರ್ಥಿನಿ ಡಾ. ಪ್ರಗತಿ ಎಂಡಿಎಸ್‌ನಲ್ಲಿ ಪ್ರಥಮ ರ್‍ಯಾಂಕ್ ಗಳಿಸಿ ಚಿನ್ನದ ಪದಕ ಪಡೆದ ಕಾರಣ ಸಂಸ್ಥೆಯಿಂದ ಗೌರವಿಸಿ ಅಭಿನಂದಿಸಲಾಯಿತು.

## ಅದ್ದೂರಿಯಾಗಿ ಜರುಗಿದ ಗುಬ್ಬಿ ಶ್ರೀ ಗೋಸಲ ಚನ್ನಬಸವೇಶ್ವರ ಸ್ವಾಮಿ ರಥೋತ್ಸವ

ಗುಬ್ಬಿ: ಗುಬ್ಬಿ ಪಟ್ಟಣದ ಕ್ಷೇತ್ರಪಾಲಕ ಗುಬ್ಬಿಯಪ್ಪ ಎಂದೇ ಖ್ಯಾತಿ ಪಡೆದ ಗೋಸಲ ಶ್ರೀ ಚನ್ನಬಸವೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಅಂಗವಾಗಿ ಭಾನುವಾರ ಜರುಗಿದ ರಥೋತ್ಸವಕ್ಕೆ ರಾಜ್ಯದ ನಾನಾ ಭಾಗಗಳಿಂದ ಆಗಮಿಸಿದ ಸಾವಿರಾರು ಭಕ್ತರು ಸಾಕ್ಷಿಯಾದರು.

ಮುಂಜಾನೆಯಿಂದಲೇ ವಿವಿಧ ಧಾರ್ಮಿಕ ಕೈಂಕರ್ಯ ನಡೆದು ಮಧ್ಯಾಹ್ನ 1.45 ಕ್ಕೆ ಸರಿಯಾಗಿ ರಥೋತ್ಸವಕ್ಕೆ ಸ್ವಾಮಿಯನ್ನು ಪಲ್ಲಕ್ಕಿ ಮೆರವಣಿಗೆ ಮೂಲಕ ಕರೆತಂದು ರಥೋತ್ಸವದಲ್ಲಿ ಪ್ರತಿಷ್ಠಾಪಿಸಿ ಬೃಹತ್ ಕಲ್ಲಿನ ತೇರು ಸಾವಿರಾರು ಭಕ್ತರು ಎಳೆದರು. ಹರಕೆ ಹೊತ್ತ ಭಕ್ತರು ದವನ ಸಿಲುಕಿಸಿದ ಬಾಳೆಹಣ್ಣು



ಎಸೆದು ತಮ್ಮ ಹರಕೆ ತೀರಿಸುವ ಕೆಲಸ ಮಾಡಿದರು.

ನವ ದಂಪತಿಗಳು ಆಗಮಿಸಿ ಬಾಳೆಹಣ್ಣು ಎಸೆದು ಹರಕೆ ಕಟ್ಟಿಕೊಳ್ಳುವ ಪದ್ಧತಿ ಸಹ ನಡೆಯುತ್ತದೆ. ಬಿರು ಬಿಸಿಲಿನ ಝಳಕ್ಕೆ ಬಳಲಿದ ಭಕ್ತರಿಗೆ ಹಲವು ಸಂಘ ಸಂಸ್ಥೆಗಳು ಪಾನಕ, ಮಜ್ಜಿಗೆ, ಕೋಸಂಬರಿ ಹಾಗೂ ಉಪಹಾರ ಪ್ರಸಾದ ನೀಡಿ ಬಾಯಾರಿಕೆ ನೀಗಿಸಿದರು. ಕೆಲ ಭಕ್ತರು ಕೆಎಂಎಫ್ ನಂದಿನಿ ಮಸಾಲಾ ಮಜ್ಜಿಗೆ ಹಾಗೂ ನೀರಿನ ಬಾಟಲ್ ಹಂಚಿದರು.

ಜಾತ್ರೆಯಲ್ಲಿ ನಿರಂತರ ದಾಸೋಹ ವ್ಯವಸ್ಥೆ ಮಾಡಿದ ದಾಸೋಹ ಸಮಿತಿ ರಥೋತ್ಸವ ನಡೆದ ತಕ್ಷಣದಿಂದ ನಿರಂತರ ರಾತ್ರಿಯವರೆಗೆ ದಾಸೋಹ ವ್ಯವಸ್ಥೆ ಕಲ್ಪಿಸಿದ್ದರು. ಸಾವಿರಾರು ಭಕ್ತರು ದಾನವಾಗಿ ನೀಡಿದ ದವನ ಧಾನ್ಯ, ತರಕಾರಿ ಇನ್ನಿತರ ದಿನಸಿಗಳಿಂದ ದಾಸೋಹ ಬ್ರೇಕ್ ಇಲ್ಲದೆ ಸಾಗಿತ್ತು. ಹಲವು ಮಠಾಧೀಶರು, ಚುನಾಯಿತ ಪ್ರತಿನಿಧಿಗಳು ರಥೋತ್ಸವಕ್ಕೆ ಸಾಕ್ಷಿಯಾದರು.



ತುಮಕೂರಿನ ನಾಲ್ವರಿಗೆ ಪ್ರಶಸ್ತಿ ಪ್ರದಾನ.ಕೊಪ್ಪಳ ದಲ್ಲಿ ಜರುಗಿದ ಕರ್ನಾಟಕ ಕಾರ್ಯನಿರತ ಪತ್ರ ಕರ್ತರ ಸಂಘದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ತುಮಕೂರು ಜಿಲ್ಲೆಯ ನಾಲ್ವರಿಗೆ ವಿವಿಧ ದತ್ತಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ಸಂಘದಲ್ಲಿ ಪ್ರಸಕ್ತ ಸಾಲಿನಿಂದ ಸಂಪಾದಕರಾದ ಎಸ್. ನಾಗಣ್ಣ ಅವರು ಸ್ಥಾಪಿಸಿರುವ ಪ್ರಜಾಪ್ರಗತಿ ದತ್ತಿ ಪ್ರಶಸ್ತಿ ಯನ್ನು ಹಿರಿಯ ಪತ್ರಕರ್ತ ಎಚ್. ಎನ್. ಮಲ್ಲೇಶ್ ಅವರಿಗೆ, ಎಸ್. ವಿ. ಜಯಶೀಲರಾವ್ ದತ್ತಿ ಪ್ರಶಸ್ತಿಯನ್ನು ಹಿರಿಯ ಪತ್ರಿಕಾ ಛಾಯಾಗ್ರಾಹಕ ಅನು ಶಾಂತರಾಜ್, ಬದರಿನಾಥ ಹೊಂಬಾಳೆ ದತ್ತಿ ಪ್ರಶಸ್ತಿ ಯನ್ನು ಹಿರಿಯ ಸಂಪಾದಕರಾದ ಗಂಗಹನುಮಯ್ಯ ಹಾಗೂ ಕೃಷ್ಣ ರಾವ್ ದತ್ತಿ ಪ್ರಶಸ್ತಿ ಯನ್ನು ಉಗಮ ಶ್ರೀ ನಿವಾಸ್ ಅವರಿಗೆ ಪ್ರದಾನ ಮಾಡಲಾಯಿತು. ಸಚಿವರಾದ ಶಿವರಾಜ ತಂಗಡಗಿ, ಸಿಎಂ ಮಾಧ್ಯಮ ಸಲಹೆ ಗಾರರಾದ ಕೆ. ವಿ. ಪ್ರಭಾಕರ್, ರಾಘವೇಂದ್ರ ಹಿಟ್ನಾಳ್, ಕುಲಪತಿ ಪ್ರೊ ಬಿ. ಕೆ. ರವಿ, ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಜಿಲ್ಲಾ ಧ್ಯಕ್ಷರಾದ ಹನುಮಂತ ಹಳ್ಳಿಕೇರಿ, ಚಿ. ನಿ. ಪುರುಷೋತ್ತಮ್ ಸೇರಿ ರಾಜ್ಯ, ಕೊಪ್ಪಳ ಜಿಲ್ಲಾ ಪದಾಧಿಕಾರಿಗಳಿದ್ದರು.

## ಮಾನವೀಯತೆ ಮೆರೆದ ತುಮಕೂರಿನ 'ಆಟೋ ರಾಜ'

*ತುಮಕೂರು: ಸುಮಾರು 4 ಲಕ್ಷ ರೂಪಾಯಿ ಮೌಲ್ಯದ ಬೆಲೆ ಬಾಳುವ ಚಿನ್ನದ ಒಡವೆಗಳನ್ನು ಆಟೋ ಚಾಲಕರೊಬ್ಬರು ವಾರಸುದಾರರಿಗೆ ಹಿಂತಿರುಗಿಸಿ ಮಾನವೀಯತೆ ಮೆರೆದಿದ್ದಾರೆ.*



ನಗರದ ಹನುಮಂತಪುರ ನಿವಾಸಿ ರವಿಕುಮಾರ್ ಎಂಬುವರೇ ವಾರಸುದಾರರಿಗೆ ಚಿನ್ನದ ಒಡವೆ ಹಿಂತಿರುಗಿಸಿ ಪ್ರಾಮಾಣಿಕತೆ ಮೆರೆದ ಆಟೋ ಚಾಲಕ. ಹಾಸನ ಜಿಲ್ಲೆಯ ಅರಸೀಕೆರೆ ಮೂಲದ ಗಾಯತ್ರಿ ಎಂಬುವರು 4 ಲಕ್ಷ ರೂಪಾಯಿ ಬೆಲೆ ಬಾಳುವ ಚಿನ್ನದ ಒಡವೆಗಳಿದ್ದ ಬ್ಯಾಗ್‌ನ್ನು ಬಿಟ್ಟು ಹೋಗಿದ್ದರು. ಈ ಚಿನ್ನದ ಒಡವೆಗಳಿದ್ದ ಬ್ಯಾಗ್‌ನ್ನು ಆಟೋ ಚಾಲಕ ರವಿಕುಮಾರ್ ಅವರು ಗಾಯತ್ರಿರವರಿಗೆ ವಾಪಸ್ ನೀಡಿದ್ದು, ಆಟೋ ಚಾಲಕ ರವಿಕುಮಾರ್‌ರವರಿಗೆ ಗಾಯತ್ರಿ ರವರು ಧನ್ಯವಾದ ತಿಳಿಸಿದ್ದಾರೆ.

ಗಾಯತ್ರಿ ಅವರು ಕುಂದೂರು ಗ್ರಾಮದಲ್ಲಿ ತಮ್ಮ ಸಂಬಂಧಿಕರೊಬ್ಬರ ಮನೆಗೆ ಸೀಮಂತ ಕಾರ್ಯಕ್ರಮಕ್ಕೆ ಬಂದಿದ್ದರು. ಸೀಮಂತ ಮುಗಿದ ಮೇಲೆ ಮೂವರು ಆಟೋದಲ್ಲಿ ಬಸ್ ನಿಲ್ದಾಣಕ್ಕೆ ತೆರಳಿದ್ದರು. ಆಟೋದಿಂದ ಬಸ್ ನಿಲ್ದಾಣದಲ್ಲಿ ಇಳಿಯುವಾಗ ಮಹಿಳೆ ಚಿನ್ನದ ಆಭರಣಗಳು ಇರುವ ಬ್ಯಾಗ್ ಮರೆತು ಹೋಗಿದ್ದರು. ಬಳಿಕ ಸ್ವಲ್ಪ ದೂರ ಹೋದ ಮೇಲೆ ನೆನಪು ಮಾಡಿಕೊಂಡು ವಾಪಸ್ ಬಂದು ಆಟೋಗಾಗಿ ಹುಡುಕಾಡಿದ್ದಾರೆ. ಇತ್ತ ಆಟೋ ಚಾಲಕ ಕೂಡ ಆಕೆಗಾಗಿ ಹುಡುಕಾಡಿದ್ದಾರೆ.

ಆಟೋ ಸಿಗದಿದ್ದಕ್ಕೆ ಮಹಿಳೆ ಪೊಲೀಸ್ ಠಾಣೆಗೆ ದೂರು ಕೊಡಲು ಬಂದಿದ್ದರು. ಇತ್ತ ಚಾಲಕ ಕೂಡ ಮಹಿಳೆ ಕಾಣದಿದ್ದಕ್ಕೆ ಬ್ಯಾಗ್ ವಾಪಸ್ ಕೊಡಬೇಕು ಎಂದು ಪೊಲೀಸ್ ಠಾಣೆಗೆ ಬಂದಿದ್ದಾರೆ. ಠಾಣೆಯಲ್ಲಿ ಚಾಲಕನ್ನು ನೋಡಿದ ಮಹಿಳೆ ಫುಲ್ ಖುಷಿಯಾಗಿ ನಿಟ್ಟುಸಿರು ಬಿಟ್ಟಿದ್ದಾರೆ.

ಬ್ಯಾಗ್‌ನಲ್ಲಿ ಸುಮಾರು 4 ಲಕ್ಷ ರೂಪಾಯಿಯ ಬೆಲೆ ಬಾಳುವ 52 ಗ್ರಾಂ ನಷ್ಟು ಚಿನ್ನಾಭರಣ ತಮ್ಮ ಕೈಸೇರಿದ್ದಕ್ಕೆ ಗಾಯತ್ರಿಯವರು ಸಂತಸ ವ್ಯಕ್ತಪಡಿಸಿದ್ದಾರೆ.

## ಬರಪೀಡಿತ ತಾಲ್ಲೂಕುಗಳ ನಿಗಧಿತ 'ಹೇಮೆ' ನೀರು ಇತರೆಡೆ ಹಂಚಿಕೆ ಬೇಡ



ಮಧುಗಿರಿ : ಬರಪೀಡಿತ ತಾಲೂಕುಗಳಿಗೆ ಈಗಾಗಲೇ ನಿಗಧಿ ಪಡಿಸಿರುವ ಹೇಮಾವತಿ ನದಿಯ ನೀರನ್ನು ಇತರೆ ತಾಲೂಕುಗಳಿಗೆ ಹರಿಯಲು ಬಿಡುವುದಿಲ್ಲಾ ನಮ್ಮ ನೀರು ನಮ್ಮ ಹಕ್ಕಾಗಿದೆ ಎಂದು ತಾಲೂಕು ವಕೀಲರ ಸಂಘದ ಅಧ್ಯಕ್ಷ ಪಿ ಸಿ ಕೃಷ್ಣ ರೆಡ್ಡಿ ತಿಳಿಸಿದರು.

ಪಟ್ಟಣದ ನ್ಯಾಯಾಲಯಗಳ ಸಂಕೀರ್ಣಗಳ ಮುಂಭಾಗ ವಕೀಲರುಗಳೊಂದಿಗೆ ಪ್ರತಿಭಟಿಸಿ ನಂತರ ಮಾತನಾಡಿದ ಅವರು ,

ಮಧುಗಿರಿ , ಪಾವಗಡ ,ಕೊರಟಗೆರೆ ತಾಲೂಕುಗಳಲ್ಲಿ ನೀರಿನ ಅಭಾವ ದಿನೇ ದಿನೇ ಹೆಚ್ಚುತ್ತಿದೆ ಹಾಗೂ ಈ ತಾಲೂಕುಗಳು ಮಳೆಯ ನೀರನ್ನು ಆಶ್ರಯಿಸಿ ರೈತರು ಅಲ್ಪ ಸ್ವಲ್ಪ ಬೆಳೆಗಳನ್ನು ಬೆಳೆಯುತ್ತಿದ್ದಾರೆ. ನೀರಾವರಿ ಕಾಮಗಾರಿಗಳು ಸಕಾಲಕ್ಕೆ ನಡೆಯದೇ ಇತ್ತೀಚಿನ ದಿನಗಳಲ್ಲಿ ಅಲ್ಪ ಪ್ರಮಾಣದ ಮಳೆಯಿಂದಾಗಿ ಕುಡಿಯುವ ನೀರು ಕೂಡ ಸಾಕಷ್ಟು ಪ್ರಮಾಣದಲ್ಲಿ ಅಲಭ್ಯವಾಗಿದೆ

ಈ ತಾಲೂಕುಗಳಿಗೆ ಎತ್ತಿನ ಹೊಳೆಯ ನೀರನ್ನು ಪೈಪ್ ಲೈನ್ ಮೂಲಕ ಹರಿಯಲಿದೆ ಆದರೆ ಈ ಪೈಪ್ ಲೈನ್ ಕಾಮಗಾರಿಗೆ ಹೆಚ್ಚು ಒತ್ತು ನೀಡಿರುವುದು ಸಹಕಾರ ಸಚಿವರಾದ ರಾಜಣ್ಣ ಹಾಗೂ ಗೃಹ ಮಂತ್ರಿಗಳಾದ ಡಾ.ಜಿ.ಪರಮೇಶ್ವರ ರವರುಗಳ ಮುತುವರ್ಜಿಯಿಂದಾಗಿ ತಾಲೂಕುಗಳ ಮತ್ತಷ್ಟು ಕೆರೆಗಳಿಗೆ ನೀರು ಹರಿಸಲು ಕ್ರಮ ಕೈಗೊಂಡಿದ್ದು ಕೆಲ ಶಾಸಕರುಗಳು ನಮ್ಮ ಪಾಲಿನ ನೀರಿಗೆ ತಡೆ ನೀಡಲು ಈಗಾ ಮುಂದಾಗುತ್ತಿದ್ದಾರೆ.ಇದೂ ಸರಿಯಾದ ಕ್ರಮವಲ್ಲ.

ನಮ್ಮ ಜಿಲ್ಲೆಯ ಸಚಿವರುಗಳ ವಿರುದ್ಧ ವಿನಾ ಕಾರಣ ಕೆಲವರು ಆರೋಪ ಮಾಡುವುದು ಅವರಿಗೆ ಶೋಭೆ ತರುವುದಿಲ್ಲ. ನೀರು ಅಗತ್ಯವಿರುವ ಆ ಶಾಸಕರುಗಳು ನಿಮ್ಮ ತಾಲೂಕುಗಳಿಗೆ ನೀರಿಗಾಗಿ ಸಂಬಂಧಪಟ್ಟವರೊಂದಿಗೆ ಚರ್ಚಿಸಿ ಪ್ರತ್ಯೇಕ ವಾಗಿ ನಿಗಧಿಪಡಿಸಿಕೊಳ್ಳುವುದು ಉತ್ತಮ. ನಮ್ಮ ಪಾಲಿನ ನೀರಿಗೆ ತೊಂದರೆ ಉಂಟು ಮಾಡಿದರೆ ಉಗ್ರ ಹೋರಾಟ ನಡೆಸಬೇಕಾದಿತು.

ಜಿಲ್ಲೆಗೆ ನೀರು ಹಂಚಿಕೆ ಮಾಡಿರುವುದು ಸರಿಯಷ್ಟೆ ಹೇಮಾವತಿ ನದಿ ನೀರಿನ ಯೋಜನೆಯಲ್ಲಿಯೇ ಬರಗಾಲ ಪೀಡಿತ ತಾಲೂಕುಗಳಿಗೆ ಹಂಚಿಕೆಯ ಮಾಡಿರುವ ನೀರು ಅಲ್ಪವಾಗಿದ್ದು ಇದರಲ್ಲಿಯೇ ಮಾಗಡಿಗೆ ಸಂಪರ್ಕ ಕಲ್ಪಿಸುವ ಉದ್ದೇಶಿತ ಕಾಲುವೆ ಕಾಮಗಾರಿ ಯಿಂದ ತುಮಕೂರು ಜಿಲ್ಲೆಗೆ ನಷ್ಟವಾಗಲಿದೆ.

ಉದ್ದೇಶಿತ ಲಿಂಕ್ ಕಾಲುವೆ ಕಾಮಗಾರಿಯನ್ನು ಮುಂದುವರೆಸಿರುವುದನ್ನು ವಕೀಲರ ಸಂಘದವರು ಗಂಭೀರವಾಗಿ ಖಂಡಿಸಿ ಕಾಮಗಾರಿಯನ್ನು ಸ್ಥಗಿತಗೊಳಿಸುವಂತೆ ಸರ್ವಾನುಮತದಿಂದ ಒತ್ತಾಯಿಸಿದರು.

ವಕೀಲರಾದ ಪಂಚಾಕ್ಷರಯ್ಯ , ನಾಗರಾಜು , ತಿಮ್ಮರಾಜು , ರಂಗನಾಥ್ , ಅಶೋಕ್ , ಹೆಚ್ ವಿ. ಮಂಜುನಾಥ್ , ನಾಗಭೂಷಣ್ , ಆನಂದ್ , ಪುಷ್ಪಲತಾ , ಅನ್ನಪೂರ್ಣ , ಮಹೇಶ್ , ದೇವರಾಜು , ಜಗದೀಶ್ , ಅಶ್ವಥ್ ನಾರಾಯಣ ಮತ್ತಿತರರು ಇದ್ದರು.

### ಪರಿಷತ್ ಕಲಾಪದಲ್ಲಿ ಚಿದಾನಂದ್‌ಗೌಡರ ಪ್ರಶ್ನೆಗೆ ಉತ್ತರಿಸಿದ ಅರಣ್ಯ ಸಚಿವ ಈಶ್ವರ್ ಖಂಡ್ರೆ

## 3,025 ಎಕರೆ ಮುದಿಗೆರೆ ಅಮೃತಮಹಲ್ ಕಾವಲ್ ಸಂರಕ್ಷಣೆ

ಬೆಂಗಳೂರು : ಶಿರಾ ತಾಲೂಕು ಮುದಿಗೆರೆಯ ಅಮೃತ ಮಹಲ್ ಕಾವಲ್‌ನ 3025 ಎಕರೆ ಅರಣ್ಯ ಪ್ರದೇಶವನ್ನು ಅರಣ್ಯವಾಗಿ ಉಳಿಸಿ, ಅಭಿವೃದ್ಧಿ ಪಡಿಸಲಾಗುವುದು ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಭರವಸೆ ನೀಡಿದ್ದಾರೆ.

ಸೋಮವಾರ ವಿಧಾನಪರಿಷತ್ತಿನ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯ ಚಿದಾನಂದ್‌ಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಮುದಿಗೆರೆ ಅಮೃತ ಮಹಲ್ ಅನ್ನು ರಾಜ್ಯ ಅರಣ್ಯ ಎಂದು ಅಂದಿನ ಮೈಸೂರು ಮಹಾರಾಜರು 1900ನೇ ಇಸವಿಯಲ್ಲಿ ಅಧಿಸೂಚನೆ ಹೊರಡಿಸಿರುತ್ತಾರೆ.

ಒಂದು ಬಾರಿ ಅರಣ್ಯ ಎಂದು ಅಧಿಸೂಚನೆ ಆದ ಮೇಲೆ ಅದು ಅರಣ್ಯವಾಗೇ ಇರುತ್ತದೆ. ಅರಣ್ಯ ಭೂಮಿಯನ್ನು ಮಂಜೂರು, ದಾನ ಮಾಡಲು ಅವಕಾಶ ಇರುವುದಿಲ್ಲ ಎಂದು ಈಶ್ವರ್ ಖಂಡ್ರೆ ಸ್ಪಷ್ಟಪಡಿಸಿದರು.

ತುಮಕೂರಿನಲ್ಲಿ 1,13,123 ಹೆಕ್ಟೇರ್ ಅರಣ್ಯ: ತುಮಕೂರು ಜಿಲ್ಲೆಯಲ್ಲಿ ಒಟ್ಟಾರೆ



1,13,123 ಹೆಕ್ಟೇರ್ ಅರಣ್ಯ ಪ್ರದೇಶವಿದೆ. ಈ ಪೈಕಿ 4001 ಪ್ರಕರಣಗಳಲ್ಲಿ 8,024 ಎಕರೆ ಅರಣ್ಯ ಭೂಮಿ ಒತ್ತುವರಿ ಅಥವಾ ಮಂಜೂರಾತಿ ಆಗಿದೆ. ಒತ್ತುವರಿ ತೆರವಿಗೆ 500 ಪ್ರಕರಣ ದಾಖಲಿಸ ಲಾಗದ್ದು, ತುಮಕೂರು, ಮಧುಗಿರಿ ಮತ್ತು ತಿಪಟೂರು ಉಪ ವಿಭಾಗದಲ್ಲಿ ಈವರೆಗೆ 457 ಎಕರೆ ಒತ್ತುವರಿ ತೆರವಿಗೆ ಆದೇಶ ನೀಡಲಾಗಿದೆ, 146 ಎಕರೆ ಒತ್ತುವರಿ ತೆರವು ಮಾಡಲಾಗಿದೆ ಎಂದು ಈಶ್ವರ್ ಖಂಡ್ರೆ ವಿವರಿಸಿದರು.

ಬುಕ್ಕಾಪಟ್ಟಣದಲ್ಲಿ ಚಿಂಕಾರ ವನ್ಯಜೀವಿ ಧಾಮದಲ್ಲಿ ಪ್ರಾಣಿಗಳಿಗೆ ಆಹಾರ ಒದಗಿಸಲು ಹುಲ್ಲು ಬೀಜ ಬಿತ್ತನೆ, ನಾಟಿ ಮಾಡಲಾಗುತ್ತಿದ್ದು, ಹುಲ್ಲು ಗಾವಲಿನಲ್ಲಿ ಬೆಳೆದಿರುವ ಲಾಂಟನಾ ತೆರವಿಗೂ ಕ್ರಮ ಕೈಗೊಳ್ಳಲಾಗಿದೆ ಎಂದು ಸಚಿವರು ಈಶ್ವರ್ ಖಂಡ್ರೆ ತಿಳಿಸಿದ್ದಾರೆ.

ಈ ಅರಣ್ಯದಲ್ಲಿ ಪ್ರಾಣಿಗಳಿಗೆ ಬೇಸಿಗೆಯಲ್ಲಿ ನೀರಿನ ಕೊರತೆ ಎದುರಾಗದಂತೆ ಹಾಲಿ ಇರುವ ಕಟ್ಟೆಗಳಲ್ಲಿ ಹೂಳು ತೆಗೆಯುವುದು, ನಾಲಾ ಬದು, ಚೆಕ್ ಡ್ಯಾಂ ನಿರ್ಮಾಣ ಮಾಡುವ ಮೂಲಕ ನೀರು ಸಂಗ್ರಹ ಹೆಚ್ಚಿಸಲಾಗುತ್ತಿದೆ ಎಂದರು.

ಚಿಂಕಾರಾ ವನ್ಯಜೀವಿಧಾಮದಲ್ಲಿ ವನ್ಯಜೀವಿ ಕಳ್ಳಬೇಟೆ ತಡೆಗೆ ಶಿಬಿರ ಸ್ಥಾಪಿಸಲಾಗಿದ್ದು, ಸಿಬ್ಬಂದಿ ರಾತ್ರಿ ಹಗಲು ಗಸ್ತು ತಿರುಗುತ್ತಿದ್ದಾರೆ. ಕಳ್ಳ ಬೇಟೆಯ ಮೇಲೆ ನಿರಂತರ ನಿಗಾ ಇಡಲಾಗಿದೆ ಎಂದು ಈಶ್ವರ್ ಖಂಡ್ರೆ ಹೇಳಿದರು.

ಕಾಡ್ಗಿಚ್ಚು ನಿಯಂತ್ರಿಸಲು ಹೊಸ ಬೆಂಕಿ ರೇಖೆ ನಿರ್ಮಾಣ, ಹಳೆಯ ಬೆಂಕಿ ರೇಖೆ ನಿರ್ವಹಣೆ, ಕಾವಲುಗಾರರ ನೇಮಕ, ಗಸ್ತು ನಿಯೋಜನೆ, ದಿನದ 24 ಗಂಟೆಯೂ ಮುನ್ನೆಚ್ಚರಿಕೆ ವ್ಯವಸ್ಥೆ ಸೇರಿ ಎಲ್ಲ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ ಎಂದು ಈಶ್ವರ್ ಖಂಡ್ರೆ ತಿಳಿಸಿದರು.

## ಹಿಂದೂ ವಿರೋಧಿ, ಅಲ್ಪಸಂಖ್ಯಾತರ ಓಲೈಕೆ ಬಜೆಟ್: ಟೀಕೆ

### ಟ್ರಾಕ್ಟರ್ ರ್‍ಯಾಲಿ ಮಾಡಿ ಸರ್ಕಾರದ ವಿರುದ್ಧ ಜಿಲ್ಲಾ ಬಿಜೆಪಿ ಪ್ರತಿಭಟನೆ

ತುಮಕೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿರುವ ಈ ಸಲಿನ ಬಜೆಟ್ ಸಂಪೂರ್ಣ ರೈತ ವಿರೋಧಿ, ದಲಿತ ವಿರೋಧಿ ಜನ ವಿರೋಧಿ ಹಿಂದೂ ವಿರೋಧಿಯಾಗಿದೆ ಎಂದು ಆಪಾದಿಸಿ ಜಿಲ್ಲಾ ಬಿಜೆಪಿ ಮುಖಂಡರು ಸೋಮವಾರ ನಗರದಲ್ಲಿ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿದರು.

ಬಿಜಿಎಸ್ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಟ್ರಾಕ್ಟರ್ ರ್‍ಯಾಲಿ ನಡೆಸಿದ ಬಿಜೆಪಿ ಮುಖಂಡರು ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಿದರು. ನಂತರ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಎಚ್.ಎಸ್.ರವಿಶಂಕರ್ ಹೆಬ್ಬಾಕ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ಬಜೆಟ್ ಮತ ಬ್ಯಾಂಕ್ ರಾಜಕಾರಣಕ್ಕೋಸ್ಕರ ಅಲ್ಪಸಂಖ್ಯಾತರನ್ನು ಓಲೈಸಿರುವ ಹಿಂದೂ ವಿರೋಧಿ ಎಂದು ತಮ್ಮನ್ನು ಸಾಬೀತು ಮಾಡಿಕೊಂಡಿದ್ದಾರೆ. ಅಲ್ಪಸಂಖ್ಯಾತರ ತುಷ್ಟೀಕರಣ ಮಾಡಿ ಬಜೆಟ್‌ನಲ್ಲಿ ರೈತರು, ದಲಿತರು, ಜನಸಾಮಾನ್ಯರ ಹಿತವನ್ನು ಧಿಕ್ಕರಿಸಿ ವಂಚಿಸಿದ್ದಾರೆ ಎಂದು ಟೀಕಿಸಿದರು.



ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಮೋಸ ಮಾಡಿ, ಅವರು ರಚಿಸಿದ ಸಂವಿಧಾನಕ್ಕೆ ಕಾಂಗ್ರೆಸ್‌ನವರು ಅಪಚಾರ ಮಾಡುತ್ತಿದ್ದಾರೆ. ಈ ಬಜೆಟ್‌ನಲ್ಲಿ ದಲಿತರಿಗೆ ಯಾವುದೇ ವಿಶೇಷ ಸೌಲಭ್ಯ ಘೋಷಣೆ ಮಾಡದೆ ದಲಿತರ ಹಣವನ್ನು ಪಂಚ ಗ್ಯಾರಂಟಿಗಳಿಗೆ ಬಳಕೆ ಮಾಡಿಕೊಳ್ಳುತ್ತಿರುವುದು ಕಾಂಗ್ರೆಸ್ ಸರ್ಕಾರದ ದಲಿತ ವಿರೋಧಿ ನೀತಿಗೆ ಸಾಕ್ಷಿಯಾಗಿದೆ. ಸಂಕಷ್ಟದಲ್ಲಿರುವ ರೈತರ ನೆರವಿಗೆ ಬರಬೇಕಾದ ಸರ್ಕಾರ ನಿರ್ಲಕ್ಷ್ಯ ಮಾಡಿದೆ. ದಲಿತರಿಗೆ ನೀಡಬೇಕಾದ ಆದ್ಯತೆ ನೀಡಲ್ಲ, ಹಿಂದೂ ಸಮುದಾಯಕ್ಕೆ ಆಗಿರುವ ಅನ್ಯಾಯವನ್ನು ಸರಿಪಡಿಸಿ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಬಿಜೆಪಿ ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷ ಬ್ಯಾಟರಂಗೇಗೌಡ ಮಾತನಾಡಿ, ದೇವರಾಜ ಅರಸು ಅವರ ಮುಖವಾಡ ಹೊತ್ತು ಅಧಿಕಾರಕ್ಕೆ ಬಂದ ಮುಖ್ಯಮಂತ್ರಿಸಿ ಸಿದ್ದರಾಮಯ್ಯ, ಅರಸು ಅವರ ಯಾವ ತತ್ವಗಳನ್ನೂ ಆಡಳಿತದಲ್ಲಿ ಅಳವಡಿಸಿಕೊಳ್ಳದೆ ಮುಸ್ಲೀಮರ ಓಲೈಕೆಯಲ್ಲಿ ತೊಡಗಿರುವುದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾಡಿದ ದ್ರೋಹ. ಮತ ರಾಜಕಾರಣ ಮಾಡಿಕೊಂಡು ಬಂದಿರುವ ಕಾಂಗ್ರೆಸ್ ಸರ್ಕಾರದಿಂದ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕೆಲಸಗಳಾಗುತ್ತಿಲ್ಲ. ಇಂತಹ ಅನ್ಯಾಯ ಮಾಡುತ್ತಿರುವ ಸರ್ಕಾರವನ್ನು ರಾಜ್ಯದ ಜನ ಕ್ಷಮಿಸುವುದಿಲ್ಲ ಎಂದರು.

ಎಸ್.ಸಿ. ಮೋರ್ಚಾ ಜಿಲ್ಲಾಧ್ಯಕ್ಷ ಎಚ್.ಎ.ಆಂಜನಪ್ಪ ಮಾತನಾಡಿ, ಕಾಂಗ್ರೆಸ್ ಸರ್ಕಾರ ಈ ಬಜೆಟ್‌ನಲ್ಲಿ ಅಲ್ಪಸಂಖ್ಯಾತರಿಗೆ ಹೆಚ್ಚಿನ ಸವಲತ್ತು ನೀಡಿದೆ, ಆದರೆ ಬಹುಸಂಖ್ಯೆಯ ದಲಿತ ವರ್ಗಕ್ಕೆ ಅನ್ಯಾಯ ಮಾಡಿದೆ. ಒಂದಲ್ಲಾ ಒಂದು ರೀತಿಯಲ್ಲಿ ಸರ್ಕಾರದಿಂದ ದಲಿತರಿಗೆ ಅನ್ಯಾಯವಾಗುತ್ತಲೇ ಇದೆ. ಎಸ್.ಸಿ, ಎಸ್ಟಿ ಸಮುದಾಯಗಳ ಅಭಿವೃದ್ಧಿಗೆ ಮೀಸಲಾದ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಂಡು ವಂಚಿಸಿದೆ ಎಂದು ಹೇಳಿದರು.

ಒಬಿಸಿ ಮೋರ್ಚಾ ಜಿಲ್ಲಾಧ್ಯಕ್ಷ ಕೆ.ವೇದಮೂರ್ತಿ ಮಾತನಾಡಿ, ತಾವು ಅಹಿಂದ ಮುಖ್ಯಮಂತ್ರಿ ಎಂದು ಹೇಳಿಕೊಳ್ಳುವ ಮುಖ್ಯಮಂತ್ರಿ ಇದರಲ್ಲಿ ದಲಿತರು, ಹಿಂದುಳಿದವರನ್ನು ಕಡೆಗಣಿಸಿ ಅಲ್ಪಸಂಖ್ಯಾತರನ್ನೇ ಓಲೈಸುತ್ತಿದ್ದಾರೆ. ಅತಿ ಹೆಚ್ಚಿನ ಜನಸಂಖ್ಯೆ ಇರುವ ಹಿಂದುಳಿದ ವರ್ಗಗಳಿಗೆ ಬಜೆಟ್‌ನಲ್ಲಿ ನ್ಯಾಯ ಒದಗಿಸಿಲ್ಲ ಎಂದು ಟೀಕಿಸಿದರು.

ರಾಜ್ಯ ಕಾರ್ಯದರ್ಶಿ ವಿನಯ್ ಬಿದರೆ, 1.3 ಲಕ್ಷ ಕೋಟಿ ಸಾಲ ಮಾಡಿರುವ ಸಿದ್ದರಾಮಯ್ಯ ಸರ್ಕಾರ ಮಂಡಿಸಿರುವ ಬಜೆಟ್ ಸಾಲದ ಬಜೆಟ್, ಈ ಮೂಲಕ ರಾಜ್ಯವನ್ನು ದಿವಾಳಿ ಅಂಚಿಗೆ ತಂದಿದ್ದಾರೆ. ಯಾವುದೇ ಹೊಸ ಯೋಜನೆ ಜಾರಿಗೆ ತರದೆ, ಬಿಜೆಪಿ ಸರ್ಕಾರ ಮಂಜೂರು ಮಾಡಿದ್ದ 9 ಹೊಸ ವಿಶ್ವವಿದ್ಯಾಲಯಗಳನ್ನು ಮುಚ್ಚಲು ಹೊರಟಿದೆ. ಮುಸಲ್ಮಾನರ 16 ಕಾಲೇಜುಗಳನ್ನು ಆರಂಭಿಸಲು ಆಸಕ್ತಿ ವಹಿಸಿದೆ. ಹಿಂದೂಗಳ ಶವಸಂಸ್ಕಾರಕ್ಕೆ ಸ್ಮಶಾನಗಳಿಲ್ಲ, ಆದರೆ ಹಿಂದೂಗಳ ಜಮೀನು ನುಂಗುವ ವಕ್ಫ್, ಖಬರ್‌ಸ್ತಾನ್‌ಗಳಿಗೆ ನೆರವು ನೀಡುತ್ತಿದೆ ಎಂದು ದೂರಿದರು.

ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಗಂಗರಾಜು, ರೈತ ಮೋರ್ಚಾ ಜಿಲ್ಲಾಧ್ಯಕ್ಷ ಸಿದ್ಧರಾಮಣ್ಣ, ಮುಖಂಡರಾದ ಸಾಗರನಹಳ್ಳಿ ವಿಜಯಕುಮಾರ್, ಹೆಚ್.ಎಂ.ರವೀಶಯ್ಯ, ಧನುಷ್, ಟಿ.ಹೆಚ್.ಹನುಮಂತರಾಜು, ಸತ್ಯಮಂಗಲ ಜಗದೀಶ್, ಸಿ.ಎನ್.ರಮೇಶ್, ವಿಷ್ಣುವರ್ಧನ್, ಪುಟ್ಟರಾಜು, ಮಂಜುನಾಥ್, ಗಣೇಶ್‌ಪ್ರಸಾದ್, ಪ್ರೇಮಾ ಹೆಗಡೆ, ಲತಾಬಾಬು, ನಾಗರತ್ನಮ್ಮ, ಗಾಯತ್ರಿ, ವಸಂತ, ಶಿವಕುಮಾರ್, ವೆಂಕಟೇಶಾಚಾರ್, ರಾಜಶೇಖರ್, ಊರ್ಡಿಗೆರೆ ರವಿ, ನಿಸರ್ಗ ರಮೇಶ್, ಹನುಮಂತರಾಜು ಮೊದಲಾದವರು ಭಾಗವಹಿಸಿದ್ದರು.

## ತೊಗರಿ ಬೆಂಬಲ ಬೆಲೆ ಖರೀದಿಗೆ ಪ್ರೋತ್ಸಾಹಕ್ಕಾಗಿ 140 ಕೋಟಿ ರೂ.

ಬೆಂಗಳೂರು: ರಾಜ್ಯ ಸರಕಾರ ತೊಗರಿ ಬೆಳೆಗಾರರ ಹಿತ ರಕ್ಷಣೆಗಾಗಿ ಬೆಂಬಲ ಬೆಲೆ ಖರೀದಿ ಯೋಜನೆಗೆ ಪ್ರೋತ್ಸಾಹಧನಕ್ಕಾಗಿ 140 ಕೋಟಿ ರೂ. ಒದಗಿಸಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಸೋಮವಾರ ವಿಧಾನಸಭೆಗೆ ತಿಳಿಸಿದರು.

ಶೂನ್ಯ ವೇಳೆಯಲ್ಲಿ ಜೆಡಿಎಸ್‌ನ ಸುರೇಶ್ ಬಾಬು ಅವರು ತೊಗರಿ ಬೆಳೆಗಾರರ ಪ್ರತಿಭಟನೆ ಬಗ್ಗೆ ಪ್ರಸ್ತಾಪಿಸಿದಾಗ, ರಾಜ್ಯ ಸರಕಾರ ಪ್ರತಿ ಕ್ವಿಂಟಲ್‌ಗೆ 450 ರೂ.

ಪ್ರೋತ್ಸಾಹ ಧನ ಘೋಷಣೆ ಮಾಡಿದೆ. ಇದೇ ಕಾರಣಕ್ಕೆ 140 ಕೋಟಿ ರೂ. ಮೀಸಲಿಟ್ಟಿದೆ ಎಂದರು.

ತೊಗರಿ ಬೆಂಬಲ ಬೆಲೆಯಲ್ಲಿ ಈಗಾಗಲೇ ಖರೀದಿ ಪ್ರಕ್ರಿಯೆ ಆರಂಭವಾಗಿದೆ ಎಂದು ತಿಳಿಸಿದರು. ಬೆಳೆ ಹಾನಿ ವಿಷಯ ಕೃಷಿ ಸಚಿವರ ವ್ಯಾಪ್ತಿಗೆ ಬರಲಿದೆ. ಈ ಬಗ್ಗೆ ಕೃಷಿ ಸಚಿವರು ಉತ್ತರ ನೀಡಲಿದ್ದಾರೆ ಎಂದು ಸ್ಪಷ್ಟಪಡಿಸಿದರು.

